# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.18/ಪಿಆರ್:51:2022-23

ದಿನಾಂಕ:21.11.2022

## ಬಾಗಲಗುಂಟೆ ವಾರ್ಡ್-18 ಸಮಿತಿ ಸಭೆಯ ನಡವಳಿಗಳು

ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020-21, ದಿ.16.04.2021ರ ಆದೇಶದಂತೆ ದಿ.21.11.2022 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.18ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ಸಭೆಗೆ ಹಾಜರಾಗಿದ್ದವರ ವಿವರಗಳು:-**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಸುರೇಶ್ ರುದ್ರಪ್ಪ | ಆರೋಗ್ಯ ವೈದ್ಯಾಧಿಕಾರಿಗಳು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು |
| 2 | ಶ್ರೀ.ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 3 | ಶ್ರೀ.ತನಯ್ ಕುಮಾರ್ ಎ | ಸಹಾಯಕ ಅಭಿಯಂತರರು, ದಾಸರಹಳ್ಳಿ |
| 4 | ಶ್ರೀಮತಿ.ಮಾಲಾ ಎಂ | ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 5 | ಶ್ರೀಮತಿ.ಶೋಭಾ ಜೆ | ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 6 | ಶ್ರೀ.ಮೋಹನ್ ಗೌರೋಜಿ | ಹಿರಿಯ ಆರೋಗ್ಯ ಪರಿವೀಕ್ಷಕರು |
| 7 | ಶ್ರೀ.ಮಹಾದೇವ ಎನ್ | ಬಿಬಿಎಂಪಿ ಮಾರ್ಷಲ್ |
| 8 | ಶ್ರೀ.ರಂಗನಾಥ್ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.18 ಬಾಗಲಗುಂಟೆ |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆಧ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

- **ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

➢ ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ಕಾವೇರಿ ಕುಡಿಯುವ ನೀರಿನ ಸರಬರಾಜು ವ್ಯವಸ್ಥೆಯಲ್ಲಿ ವ್ಯತ್ಯಯಗಳು ಉಂಟಾಗುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ನೀರಿನ ಸಮಸ್ಯೆ ಹೆಚ್ಚಾಗುತ್ತಿರುವುದಾಗಿ ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

➢ ಒಳಚರಂಡಿ ವ್ಯವಸ್ಥೆಗಾಗಿ ಪೈಪ್‌ಲೈನ್ ಅಳವಡಿಸಲು ರಸ್ತೆಯನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕತ್ತರಿಸಿರುವುದು ಕಂಡುಬಂದಿರುತ್ತದೆ. ಸದರಿ ವಿಷಯಗಳ ದುರಸ್ಥಿ ಕಾರ್ಯವನ್ನು ತುರ್ತಾಗಿ ನಿರ್ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರಿಗೆ ಸೂಚಿಸಲಾಯಿತು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ

Scanned with CamScanner

- **ಕಂದಾಯ ಇಲಾಖೆಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

> ಆಧಾರ್ ಕಾರ್ಡ್‌ಗಳನ್ನು ಗುರುತಿನ ಚೀಟಿ (Voter ID) ಗೆ ಲಿಂಕ್ ಮಾಡುವ ಬಗ್ಗೆ ಮನೆಮನೆಗೆ ಹೋಗಿ ಪ್ರಚಾರ ಮಾಡಿ, ತುರ್ತು ಕಾರ್ಯ ಪ್ರವೃತ್ತರಾಗಬೇಕೆಂದು ಸರ್ವಾನುಮತದಿಂದ ತೀರ್ಮಾನಿಸಿ, ಅದರಂತೆ ತುರ್ತು ಕ್ರಮವಹಿಸಲು ಕಂದಾಯ ಇಲಾಖೆಗೆ ಸೂಚಿಸಲಾಯಿತು.

ಕ್ರಮ:ಕಂದಾಯ ಇಲಾಖೆ, ಸ.ಕಂ.ಅ, ವಾ–18/ಸದಸ್ಯ ಕಾರ್ಯದರ್ಶಿ

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಘನತ್ಯಾಜ್ಯ ವಿಲೇವಾರಿ ಮಾಡಲು ಕ್ರಮವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು. 35 ಆಟೋಗಳು 35 ಬ್ಲಾಕ್‌ಗಳಲ್ಲಿ ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿದರು ಹಾಗೂ ಸಂಬಂಧಿಸಿದ ಗುತ್ತಿಗೆದಾರರು ಹಾಗೂ ಮೇಲ್ವಿಚಾರಕರುಗಳು ಹಾಜರಿದ್ದು, ಘನತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಸೂಚಿಸಲಾಯಿತು.

> ಬ್ಲಾಕ್‌ಸ್ಪಾಟ್‌ಗಳಲ್ಲಿ ಸಾರ್ವಜನಿಕರು ಕಸ ಹಾಕದಂತೆ ಬಿಬಿಎಂಪಿ ಮಾರ್ಷಲ್‌ಗಳನ್ನು ನಿಯೋಜಿಸಲು ವಾರ್ಡ್ ಸಮಿತಿ ಸದಸ್ಯರು ಕೋರಿದರು. ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

> ಬಾಗಲಗುಂಟೆ ವಾರ್ಡ್ ವ್ಯಾಪ್ತಿಯ ಮುನಿಕೊಂಡಪ್ಪ ಬಡಾವಣೆ ಹಾಗೂ ವಿಡಿಯಾ ಕ್ಲಬ್ ಹತ್ತಿರ ಕಸದ ರಾಶಿಗೆ ಬೆಂಕಿ ಹಚ್ಚುತ್ತಿರುವುದರಿಂದ ಇಲ್ಲಿನ ಸ್ಥಳೀಯ ನಿವಾಸಿಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

>

ಕ್ರಮ:ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

- **ಕೋವಿಡ್–19 ಸಾಂಕ್ರಾಮಿಕ ರೋಗದ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಸಂಬಂಧಿಸಿದಂತೆ, ಆರೋಗ್ಯ ಪರಿವೀಕ್ಷಕರು ಈ ಕೆಳಕಂಡಂತೆ ಮಾಹಿತಿ ಒದಗಿಸಿದರು.

| | | |
|---|---|---|
| ಒಟ್ಟು ಪ್ರಕರಣಗಳು | : | 9191 |
| ಬಿಡುಗಡೆಯಾದ ಪ್ರಕರಣಗಳು | : | 9028 |
| ಸಕ್ರಿಯ ಪ್ರಕರಣಗಳು | : | 00 |
| ಮರಣ | : | 162 ಇರುತ್ತದೆಂದು ತಿಳಿಸಿದರು. |

ಕೋವಿಡ್ ನಿಯಂತ್ರಣ ಸಂಬಂಧ ಹೊಸದಾಗಿ ಕಾರ್ವಿ ಲಸಿಕೆಯನ್ನು ನೀಡಲಾಗುತ್ತಿದ್ದು, ಸದರಿ ಲಸಿಕೆ ಸಧ್ಯದ ಪರಿಸ್ಥಿತಿಯಲ್ಲಿ ಲಭ್ಯವಿಲ್ಲದಿರುವುದಾಗಿ ಹಾಗೂ ಈ ಹಿಂದೆ ನೀಡಲಾಗುತ್ತಿದ್ದ ಬೂಸ್ಟರ್ ಲಸಿಕೆ 100% ಪೂರ್ಣಗೊಂಡಿರುವುದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯಾಧಿಕಾರಿಗಳು ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಮಳೆ ಹೆಚ್ಚಾಗಿ ಬರುತ್ತಿರುವುದರಿಂದ ರಸ್ತೆಯ ಅಕ್ಕಪಕ್ಕ, ದೇವಸ್ಥಾನದ ಸುತ್ತಮುತ್ತಲಿನ ಪ್ರದೇಶಗಳಿಗೆ ಬ್ಲೀಚಿಂಗ್ ಪೌಡರ್ ಸಿಂಪಡಣೆ ಕಾರ್ಯ ಕೈಗೊಳ್ಳಲು ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ಕೋರಿದರು.

ಕ್ರಮ: ಕೋವಿಡ್ ಆರೋಗ್ಯ ವೈಧ್ಯಾಧಿಕಾರಿಗಳು/ ಹಿರಿಯ ಆರೋಗ್ಯ ಪರಿವೀಕ್ಷಕರು

Scanned with CamScanner

- ಇತರೆ ವಿಷಯಗಳ ಬಗ್ಗೆ.

- ಬೆಸ್ಕಾಂ ಇಲಾಖೆಯವರು ಯಾವುದೇ ಅನುಮತಿ ಪಡೆಯದೇ ಸಾರ್ವಜನಿಕ ರಸ್ತೆಯನ್ನು ಅಗೆದು ಕೇಬಲ್ ಅಳವಡಿಸುವ ಕಾರ್ಯವನ್ನು ನಡೆಸುತ್ತಿರುವುದರಿಂದ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುತ್ತದೆ. ಈ ಬಗ್ಗೆ ತುರ್ತು ಕ್ರಮವಹಿಸಿ ದುರಸ್ಥಿ ಕಾರ್ಯ ಕೈಗೊಂಡು ಪೂರ್ಣಗೊಳಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲು ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ಕೋರಿದರು.
- ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ಬೀದಿದೀಪಗಳು ಸರಿಯಾಗಿ ಕಾರ್ಯ ನಿರ್ವಹಿಸದೇ ಇರುವ ಬಗ್ಗೆ ಪರಿಶೀಲಿಸಲು ವಾರ್ಡ್ ಸದಸ್ಯರು ಸಭೆಯಲ್ಲಿ ಕೋರಿದರು ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯ ಹಲವಾರು ಬಡಾವಣೆಗಳಲ್ಲಿ ರಸ್ತೆ ಅಭಿವೃದ್ಧಿ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿರುವುದಾಗಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.
- ಬಿಬಿಎಂಪಿ ಮಾರ್ಷಲ್‌ಗಳು ಕಳಪೆ ಗುಣಮಟ್ಟದ ಪ್ಲಾಸ್ಟಿಕ್ ಬಳಸುತ್ತಿರುವ ಅಂಗಡಿ ಮಾಲೀಕರುಗಳು, ಬೀದಿಬದಿ ವ್ಯಾಪಾರಿಗಳಿಗೆ ಇನ್ನಿತರೆಯವರುಗಳಿಗೆ ದಂಡ ವಿಧಿಸುತ್ತಿರುವುದಾಗಿ ಬಿಬಿಎಂಪಿ ಮಾರ್ಷಲ್‌ಗಳು ತಿಳಿಸಿದರು ಇದನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸರ್ವಾನುಮತದಿಂದ ಸಭೆಯಲ್ಲಿ ಸೂಚಿಸಲಾಯಿತು.

ಸ.ಅ ವಾ.18/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)

**ಸಹಾಯಕ ಅಭಿಯಂತರರು**
**ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ**

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.18, ಬಾಗಲಗುಂಟೆ**
**ಮತ್ತು ಆರೋಗ್ಯ ವೈದ್ಯಾಧಿಕಾರಿಗಳು (ದಾ.ವ)**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**<u>ಅಧಿಕಾರಿಗಳ ಮಾಹಿತಿಗಾಗಿ:-</u>**

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2). ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈದ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14) ಕಛೇರಿ ಪ್ರತಿ.

Scanned with CamScanner